ಇಲಾಖೆ / ವಿಷಯ: DEPARTMENT / SUBJECT: ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 23/07/2019

# ನನ್ನ ನಕಲಿ ರಾಜೀನಾಮೆ ಪತ್ರ ಹರಿಯಬಿಟ್ಟು ಅಪಪ್ರಚಾರ

## ಸದನದಲ್ಲಿ ಆಕ್ರೋಶ ವ್ಯಕ್ತಪಡಿಸಿದ ಕುಮಾರಸ್ವಾಮಿ

ವಿಧಾನಸಭೆ: ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ ರಾಜೀನಾಮೆ ಪತ್ರವು ನಕಲಿಯಾಗಿದ್ದು, ಸುಳ್ಳು ಸಹಿ ರುಜು ಮಾಡಿ ಅಪಪ್ರಚಾರ ನಡೆಯುತ್ತಿದೆ ಎಂದು ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ.



ರಾಜ್ಯಪಾಲರಿಗೆ ಮುಖ್ಯಮಂತ್ರಿಗಳು ರಾಜೀನಾಮೆ ನೀಡಿರುವ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿರುವ ಬಗ್ಗೆ ಸೋಮವಾರ ಸ್ಪಷ್ಟನೆ ನೀಡಿ ಪತ್ರವನ್ನು ಪ್ರದರ್ಶಿಸಿದರು. ಮಾಧ್ಯಮಗಳು ಯಾವ ಮಟ್ಟಕ್ಕೆ ಇಳಿದಿವೆ ಎಂದರೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಲಾಗಿದೆ ಎಂಬುದಾಗಿ ವರದಿ ಮಾಡಿವೆ. ಅಲ್ಲದೇ, ಕೀಳು ಮಟ್ಟದ ರಾಜಕಾರಣ ಕೂಡ ಮಾಡಲಾಗುತ್ತಿದೆ. ರಾಜೀನಾಮೆ ಬಗ್ಗೆ ಯಾವುದೇ ತೀರ್ಮಾನಕ್ಕೆಗೊಳ್ಳದಿದ್ದರೂ ಈ ರೀತಿಯಾಗಿ ಸುದ್ದಿ ಹಬ್ಬಿಸುವುದು ಸರಿಯಲ್ಲ ಎಂದರು.

ಸಭಾಧ್ಯಕ್ಷರ ಬಗ್ಗೆ ಅಪಾರ ಗೌರವ, ನಂಬಿಕೆ ಇದೆ ಎಂದು ಬಿಜೆಪಿಯ ಸದಸ್ಯ ಮಾಧುಸ್ವಾಮಿ ಹೇಳಿದ್ದಾರೆ. ಆದರೆ, ಪದೇ ಪದೇ ನ್ಯಾಯಾಲಯವನ್ನು ಆಶ್ರಯಿಸುತ್ತಾರೆ. ಸಭಾಧ್ಯಕ್ಷರ ಮೇಲೆ ನಂಬಿಕೆ ಇದ್ದರೆ ಸುಪ್ರೀಂಕೋರ್ಟ್‌ಗೆ ಹೋಗುತ್ತಿರಲಿಲ್ಲ. ಸುಮ್ಮನೆ ಇಷ್ಟು ದಿನ ಎಳೆಯುತ್ತಿರಲಿಲ್ಲ. ಸೋಮವಾರ ಸದನವನ್ನು ಮುಗಿಸುವ ಬಗ್ಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಮತ್ತು ನಾನು ಹೇಳಿದ್ದು ನಿಜ. ಆದರೆ, ಮತ್ತೆ ಕೆಲವರು ಸುಪ್ರೀಂ ಕೋರ್ಟ್ ಮೊರೆಹೋಗಿದ್ದು, ಸಂಜೆ 5 ಗಂಟೆ ವೇಳೆಗೆ ಬಹುಮತ ಸಾಬೀತು ಪಡಿಸುವ ಬಗ್ಗೆ ನಿರ್ದೇಶನ ನೀಡುವಂತೆ ಕೋರಿದ್ದಾರೆ. ಇದು ಎಷ್ಟು ಸರಿ ಎಂದು ಕೇಳಿದರು.

ಈ ವೇಳೆ ಬಿಜೆಪಿ ಶಾಸಕ ಮಾಧುಸ್ವಾಮಿ ಮಾತನಾಡಿ, ಸೋಮವಾರವೇ ಮುಗಿಸಿದರೆ ಗೌರವ ಉಳಿಯುತ್ತಿದೆ. ಹೇಳಿದಂತೆ ವಿಶ್ವಾಸ ಮತಯಾಚನೆ ಮುಗಿಸಿ ಎಂದು ಹೇಳಿದರು. ತಕ್ಷಣ ಆಕ್ರೋಶಭರಿತವಾಗಿ ಮಾತನಾಡಿದ ಮುಖ್ಯಮಂತ್ರಿ ಕುಮಾರಸ್ವಾಮಿ, ಈಗ ಏನು ಅಗೌರವ ಆಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.